**ದಿನಾಂಕಃ 02.07.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 4ನೇ ಎದುದಾರರ ಪರ ಮಾನ್ಯ ವಕೀಲರಿಂದ.**

ಆ ದಿನ ನಾವು ಬೆಂಗಳೂರಿನಿಂದ ಬೆಳಗಾವಿಗೆ ಹೊರಟಿದ್ದೆವು. ಅಪಘಾತ ಬೆಳಿಗ್ಗೆ ಸುಮಾರು 8-9 ಗಂಟೆಯ ಸಮಯದಲ್ಲಿ ಸಂಭವಿಸಿರುತ್ತದೆ. ಅಪಘಾತ ದಾವಣಗೆರೆಯ ಸಮೀಪ ಆಗಿದ್ದು, ಬೆಂಗಳೂರಿನಿಂದ ಎಷ್ಟು ಅಂತರದಲ್ಲಿ ಇದೆ ಎಂದು ಹೇಳಲು ಆಗುವುದಿಲ್ಲ. ಬೆಂಗಳೂರಿನಿಂದ ದಾವಣಗೆರೆಗೆ ಹೋಗಲು ಸುಮಾರು 5 ಗಂಟೆಯ ಅವಧಿ ಬೇಕಾಗುತ್ತದೆ ಎಂದರೆ ಸರಿ. ಬೆಂಗಳೂರು-ದಾವಣಗೆರೆ ರಸ್ತೆ ತ್ರಿಪಥ ರಸ್ತೆ ಎಂದರೆ ಸರಿ. ನಾನು ಹೋಗುತ್ತಿದ್ದ ವಾಹನವನ್ನು ಸುಮಾರು 100 ಕಿ.ಮೀ ವೇಗಕ್ಕಿಂತ ಹೆಚ್ಚಿ ನ ವೇಗದಲ್ಲಿ ಚಾಲನೆ ಮಾಡುತ್ತಿದ್ದರು ಎಂದರೆ ಸರಿಯಲ್ಲ. ವಾಹನವನ್ನು ಸುಮಾರು 70-80 ಕಿ.ಮೀ ಗಿಂತ ಕಡಿಮೆ ವೇಗದಲ್ಲಿ ಚಾಲನೆ ಮಾಡುತ್ತಿದ್ದರು. ರಸ್ತೆಯ ಎಡಭಾಗದ ಲೇನ್ ನಲ್ಲಿ ಹೋಗುತ್ತಿದ್ದೆವು. ವಿಭಜಕದ ಪಕ್ಕದಲ್ಲಿ ಹೋಗುತ್ತಿದ್ದೆವು ಎಂದರೆ ಸರಿಯಲ್ಲ. ನಾವು ಹೋಗುತ್ತಿದ್ದ ಪಥದ ಎಡಭಾಗದಲ್ಲಿ ಸುಮಾರು 1-1.5 ಮೀಟರ್ ಅಂತರದಲ್ಲಿ ಮಣ್ಣಿನ ರಸ್ತೆ ಇತ್ತು. ನಾನು ಹೋಗುತ್ತಿದ್ದ ಬೈಕಿನ ಮುಂಭಾಗಕ್ಕೆ ಸಂಪೂರ್ಣ ಜಖಂ ಉಂಟಾಗಿದೆ ಎಂದರೆ ಸರಿ. ಪೊಲೀಸ್ ದಾಖಲಾತಿಗಳನ್ನು ನೋಡಿ ತಿಳಿದುಕೊಂಡಿದ್ದೇನೆ.

ಆ ದಿನ ನಾನು ತಲೆಗೆ ಹೆಲ್ಮೆಟ್ ಧರಿಸದೇ ಇದ್ದ ಕಾರಣ ತಲೆಗೆ ಗಾಯಗಳು ಆಗಿರುತ್ತವೆ ಎಂದರೆ ಸರಿಯಲ್ಲ. ಅಪಘಾತದಲ್ಲಿ ನನ್ನ ಎಡಗಾಲಿಗೆ, ತಲೆಗೆ, ಬೆನ್ನಿಗೆ ಮತ್ತು ಇತರ ಭಾಗಗಳಿಗೆ ಪೆಟ್ಟಾಗಿರುತ್ತದೆ. ಅಪಘಾತವಾದ ನಂತರ ಚಿಗಟಗೇರಿ ಸರ್ಕಾರಿ ಆಸ್ಪತ್ರೆಗೆ ಸ್ಥಳದಲ್ಲಿದ್ದ ಸಾರ್ವಜನಿಕರು ಕರೆದುಕೊಂಡು ಹೋಗಿರುತ್ತಾರೆ. ನನಗೆ ಗಾಯಾಳು ಆದ ಬಗ್ಗೆ ಆಸ್ಪತ್ರೆಯಲ್ಲಿ ಮಾಹಿತಿ ನೀಡಿದ್ದಾರೋ, ಇಲ್ಲವೋ ನನಗೆ ಗೊತ್ತಿಲ್ಲ. ಸದರಿ ಆಸ್ಪತ್ರೆಯ ಎಂ.ಎಲ್.ಸಿ ವಹಿಯನ್ನು ಹಾಜರುಪಡಿಸಿಲ್ಲ ಮತ್ತು ಹಾಜರುಪಡಿಸಲು ತೊಂದರೆ ಇಲ್ಲ. ನಂತರದಲ್ಲಿ ಶಿವಯ್ಯ ಆಸ್ಪತ್ರೆ,

ಯೂನಾನಿಯ ಆಯುರ್ವೇದ ಆಸ್ಪತ್ರೆ, ಸಂಜಯ್ ಗಾಂಧಿ ಆಸ್ಪತ್ರೆಗೆ, ಕೆ.ಸಿ ಜನರಲ್ ಆಸ್ಪತ್ರೆ ಮತ್ತು ಸಪ್ತಗಿರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುತ್ತೇನೆ. ಶಿವಯ್ಯ ಆಸ್ಪತ್ರೆ, ಯೂನಾನಿಯ ಆಯುರ್ವೇದ ಆಸ್ಪತ್ರೆಯಲ್ಲಿ ಯಾವ ರೀತಿಯ ಚಿಕಿತ್ಸೆ ನೀಡಲಾಗಿದೆ ಎಂದು ತೋರಿಸಲು ದಾಖಲಾತಿಯನ್ನು ಹಾಜರುಪಡಿಸಲು ತೊಂದರೆ ಇಲ್ಲ. ಸಪ್ತಗಿರಿ ಆಸ್ಪತ್ರೆಯಲ್ಲಿ ನನಗೆ ಶಸ್ತ್ರ ಚಿಕಿತ್ಸೆ ಮಾಡಿರುತ್ತಾರೆ, ಆದರೆ ವೈದ್ಯರ ಹೆಸರು ನೆನಪಿಲ್ಲ. ಸದರಿ ಆಸ್ಪತ್ರೆಯ ಬಿಡುಗಡೆ ಸಮರಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಈಗಲೂ ಮುಂದುವರೆದ ಚಿಕಿತ್ಸೆಯನ್ನು ಪಡೆಯುತ್ತಿದ್ದೇನೆ. ಕೊನೆಯದಾಗಿ 2025ರ ನವೆಂಬರ್-ಡಿಸೆಂಬರ್ ತಿಂಗಳಿನಲ್ಲಿ ಆಸ್ಪತ್ರೆಗೆ ಹೋಗಿರುತ್ತೇನೆ. ಚಿಕಿತ್ಸೆಗೆ ಮತ್ತು ಇತರೆ ಖರ್ಚುಗಳಿಗೆ ನಾನು ಹೇಳಿರುವಷ್ಟು ಹಣವನ್ನು ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ನಾನು ಹೇಳಿರುವಷ್ಟು ಹಣವನ್ನು ಖರ್ಚು ಮಾಡಿದ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಲು ತೊಂದರೆ ಇಲ್ಲ. ಅಪಘಾತದಲ್ಲಿ ಉಂಟಾದ ಗಾಯಗಳು ವಾಸಿಯಾಗಿವೆ ಎಂದರೆ ಸರಿಯಲ್ಲ. ಆದ ಕಾರಣ ಸಂಬಂಧಪಟ್ಟ ದಾಖಲಾತಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ಮೊದಲಿನಂತೆ ಈಗಲೂ ಆರೋಗ್ಯವಾಗಿದ್ದೇನೆ ಎಂದರೆ ಸರಿಯಲ್ಲ. ಮೆಡಿಕಲ್ ಬಿಲ್ಲುಗಳನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಸಪ್ತಗಿರಿ ಆಸ್ಪತ್ರೆಯ ಇನ್ ಪೇಷೆಂಟ್ ಬಿಲ್ಲನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಶಿವಾಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಿಪಿ 13 ಮೂಲ ಪ್ರತಿಯಾಗಿರುವುದಿಲ್ಲ ಎಂದರೆ ಸರಿ. ಸದರಿ ದಾಖಲಾತಿಯ ಮೂಲ ಪ್ರತಿ ಆಸ್ಪತ್ರೆಯಲ್ಲಿ ಇದೆ.

ನಾನು 2016ರಲ್ಲಿ ಡಿಪ್ಲೋಮಾ ತರಬೇತಿ ಮುಗಿಸಿರುತ್ತೇನೆ. ನಂತರ ಹೆಚ್ಚಿನ ವಿದ್ಯಾಭ್ಯಾಸ ಮಾಡಿಲ್ಲ. ನಾನು ಈಗ ಯಾವುದೇ ಕೆಲಸ ಮತ್ತು ವ್ಯಾಸಂಗ ಮಾಡುತ್ತಿಲ್ಲ. ಅಪಘಾತವಾಗುವ ಪೂರ್ವದಲ್ಲಿ ನಾನು ಬಂಡಲ್ ಟೆಕ್ನಾಲಕಿಸ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದೆನು. ಸದರಿ ಕಂಪನಿಗೆ

2018ರಲ್ಲಿ ಸೇರಿರುತ್ತೇನೆ. ಸದರಿ ಕಂಪನಿಯಲ್ಲಿ ನನಗೆ ತಿಂಗಳಿಗೆ ರೂ.30,000/- ಸಂಬಳ ನೀಡುತ್ತಿದ್ದರು. ನನ್ನ ಸಂಬಳದ ಹಣವನ್ನು ಕರ್ನಾಟಕ ಬ್ಯಾಂಕಿನಲ್ಲಿರುವ ನನ್ನ ಖಾತೆಗೆ ಹಾಕುತ್ತಿದ್ದರು. ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಲು ತೊಂದರೆ ಇಲ್ಲ. ಸದರಿ ಕಂಪನಿಯಲ್ಲಿ ನೇಮಕವಾದ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ ಮತ್ತು ಹಾಜರುಪಡಿಸಲು ತೊಂದರೆ ಇಲ್ಲ. ಮೊದಲಿನಂತೆ ನನಗೆ ಕೆಲಸ ಮಾಡಲು ಆಗುತ್ತಿಲ್ಲ, ಆದ ಕಾರಣ ನಾನೇ ಕೆಲಸ ಬಿಟ್ಟುರುತ್ತೇನೆ. ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ. ಪ್ರಸ್ತುತ ನನ್ನ ತಂದೆ ತಾಯಿಯ ಆದಾಯದ ಮೇಲೆ ಅವಲಂಬಿಸಿರುತ್ತೇನೆ. ನನ್ನ ಕೆಲಸ ಮತ್ತು ಆದಾಯಕ್ಕೆ ಸಂಬಂಧಪಟ್ಟಂತೆ ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ಹೇಳುವಷ್ಟು ಆದಾಯ ನನಗೆ ಇರಲಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಕೆಲಸ ಮಾಡುತ್ತಿರಲಿಲ್ಲ ಮತ್ತು ನನಗೆ ಯಾವುದೇ ಆದಾಯ ಇರಲಿಲ್ಲ ಎಂದರೆ ಸರಿಯಲ್ಲ. ನಾನು ಈಗಲೂ ಕೆಲಸ ಮಾಡುತ್ತಿದ್ದರೂ ಸಹ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 1ನೇ ಎದುದಾರರ ಪರ ಮಾನ್ಯ ವಕೀಲರಿಂದ.**

1ನೇ ಎದುರುದಾರರ ಪರ ಮಾನ್ಯ ವಕೀಲರು ಗೈರು ಹಾಜರಾದ ಕಾರಣ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**